# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 931 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 18-12-2018 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಆರೋಗ್ಯ ಇಲಾಖೆಯಲ್ಲಿನ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುವ ನೌಕರರ ಸಂಖ್ಯೆ ಎಷ್ಟು : | ರಾಷ್ಟ್ರೀಯ ಆರೋಗ್ಯ ಅಭಿಯಾನವು ಆರೋಗ್ಯ ಇಲಾಖೆಯ ಪೂರಕ ಕಾರ್ಯಕ್ರಮವಾಗಿದ್ದು, ಭಾರತ ಸರ್ಕಾರದ ಆರ್.ಓ.ಪಿ (ರೆಕಾರ್ಡ್ ಆಫ್ ಪ್ರೊಸಿಡಿಂಗ್ಸ್)ನ ಅನುಮೋದನೆಯಂತೆ ಗುತ್ತಿಗೆ ಆಧಾರದ ಹುದ್ದೆಗಳ ವಿವರ ಕೆಳಕಂಡಂತಿದೆ.<br><table><tr><td>ಅನುಮೋದಿತ ಹುದ್ದೆಗಳ ಸಂಖ್ಯೆ</td><td>ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ</td><td>ಖಾಲಿ ಇರುವ ಹುದ್ದೆಗಳ ಸಂಖ್ಯೆ:</td></tr><tr><td>22484</td><td>18683</td><td>3801</td></tr></table> |
| ಆ) | ಇವರು ಯಾವ ಯಾವ ಆಯಕಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ: (ವಿವರ ನೀಡುವುದು) | ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. |
| ಇ) | ಈ ನೌಕರರು ಕರ್ತವ್ಯ ಬಹಿಷ್ಕರಿಸಿ ಪ್ರತಿಭಟನೆ ಮಾಡಲು ಕಾರಣವೇನು; | ಸೇವಾ ಭದ್ರತೆ, ಸಮಾನ ಕೆಲಸಕ್ಕೆ ಸಮಾನ ವೇತನ, ಕೆಲಸ ನಿರ್ವಹಿಸುತ್ತಿರುವ ಸ್ಥಳದಲ್ಲಿ ಘನತೆ, ಗುತ್ತಿಗೆ ನೌಕರರಿಗೂ ಜ್ಯೋತಿ ಸಂಜೀವಿನಿಯಂತಹ ಯೋಜನೆಗಳ ಅನುಕೂಲ ಒದಗಿಸುವ ಬಗ್ಗೆ. |
| ಈ) | ಗುತ್ತಿಗೆ ನೌಕರರಿಗೆ ಇಲಾಖೆಯಿಂದಲೇ ನೇರವಾಗಿ ವೇತನ ಪಾವತಿ, ಸರ್ಕಾರಿ ನೌಕರರಿಗೆ ನೀಡುವ ಜ್ಯೋತಿ ಸಂಜೀವಿನಿ, ವಿಮೆಯೋಜನೆ, ಸಮಾನ ವೇತನ ಹಾಗೂ ಸೇವಾ ಭದ್ರತೆ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಷ್ಟ್ರೀಯ ಆರೋಗ್ಯ ಅಭಿಯಾನವು ಆರೋಗ್ಯ ಇಲಾಖೆಯ ಪೂರಕ ಕಾರ್ಯಕ್ರಮವಾಗಿದ್ದು, ಭಾರತ ಸರ್ಕಾರದ ಆರ್.ಓ.ಪಿ (ರೆಕಾರ್ಡ್ ಆಫ್ ಪ್ರೊಸಿಡಿಂಗ್ಸ್) ನ ಅನುಮೋದನೆಯಂತೆ:-<br>• ಗುತ್ತಿಗೆ ಆಧಾರದ ಸಿಬ್ಬಂದಿಗಳಿಗೆ ವೇತನವನ್ನು **Public Financial Management System** (ಪಿ.ಎಫ್.ಎಂ.ಎಸ್) ಮೂಲಕ ಪಾವತಿಸಲಾಗುತ್ತದೆ.<br>• ಹೊರ ಗುತ್ತಿಗೆ ಆಧಾರದ ಸಿಬ್ಬಂದಿಗಳಿಗೆ ವೇತನವನ್ನು ಮಾನವ ಸಂಪನ್ಮೂಲ ಸೇವೆ ಒದಗಿಸುವ ಏಜನ್ಸಿ ಮೂಲಕ ಪಾವತಿಸಲಾಗುತ್ತದೆ.<br>ಸರ್ಕಾರಿ ನೌಕರರಿಗೆ ನೀಡುವ ಜ್ಯೋತಿ ಸಂಜೀವಿನಿ, ವಿಮಾಯೋಜನೆ ಸಮಾನ ವೇತನ ಹಾಗೂ ಸೇವಾ ಭದ್ರತೆಗಳನ್ನು ಗುತ್ತಿಗೆ ನೌಕರರಿಗೆ ಒದಗಿಸಲು ಬರುವುದಿಲ್ಲ |

ಸಂಖ್ಯೆ: ಆಕುಕ 931 ಟಿ. ಕ 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು